ರೇಖೆಗಿಂತ ಕೆಳಗಿರುವ ಕುಟುಂಬದವರಿಗೆ ಕ್ಯಾನ್ಸರ್, ಕಿಡ್ನಿ, ಹೃದಯ, ಬ್ರೈನ್‌ಟ್ಯೂಮರ್ ಸುಟ್ಟ ಗಾಯಗಳು ಮುಂತಾದ ಕಾಯಿಲೆಗಳ ಚಿಕಿತ್ಸೆಗಾಗಿ "ವಾಜಪೇಯಿ ಆರೋಗ್ಯಶ್ರೀ" ಎಂಬ ಯೋಜನೆಯನ್ನು ಜಾರಿಗೊಳಿಸ ಲಾಗುತ್ತಿದ್ದು, ಅದರಡಿ ಪ್ರತಿ ಕುಟುಂಬಕ್ಕೆ ಫ್ಯಾಮಿಲಿ ಫ್ಲೋಟರ್ ಅಧಾರದ ಮೇಲೆ ರೂ.1.50 ಲಕ್ಷಗಳಿಂದ ರೂ.2.00 ಲಕ್ಷಗಳವರೆಗೆ ಗುರುತಿಸಲ್ಪಟ್ಟ ಸರ್ಕಾರಿ/ಖಾಸಗಿ ಆಸ್ಪತ್ರೆಗಳಲ್ಲಿ ಉಚಿತ ಚಿಕಿತ್ಸಾ ಸೌಲಭ್ಯ ಪಡೆಯಲು ಅವಕಾಶ ಕಲ್ಪಿಸಲಾಗಿದೆ.

ಆ) "ವಾಜಪೇಯಿ ಆರೋಗ್ಯಶ್ರೀ" ಎಂಬ ಯೋಜನೆಯನ್ನು ಜಾರಿಗೊಳಿಸಲಾಗುತ್ತಿರುವ ಕಾರಣ ಇದು ಉದ್ಭವಿಸುವುದಿಲ್ಲ.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಜನಾಂಗದವರಿಗೆ ವಸತಿ ಶಾಲೆಗಳನ್ನು ಪ್ರಾರಂಭಿಸುವುದು.

900 (1133) ಶ್ರೀ ನರೇಂದ್ರ ಆರ್. (ಹನೂರು) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿಯೇ ಅತಿ ಹೆಚ್ಚು ಗಿರಿಜನರು (ಸೋಲಿಗರು) ಕೊಳ್ಳೆಗಾಲ ತಾಲ್ಲೂಕಿನ ಹನೂರು ಕ್ಷೇತ್ರದಲ್ಲಿ ವಾಸಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, 2009-10ನೇ ಸಾಲಿನಲ್ಲಿ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆ ಅಥವಾ ಕಸ್ತೂರ ಬಾ ವಸತಿ ಶಾಲೆ ಅಥವಾ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಜನಾಂಗದವರು ಹೆಚ್ಚಾಗಿ ವಾಸಿಸುವ ಈ ಮತ ಕ್ಷೇತ್ರದಲ್ಲಿ ತೆರೆಯದಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, 2010-11ನೇ ಸಾಲಿನಲ್ಲಿ ಈ ಜನಾಂಗದ ಮಕ್ಕಳ ವಿಧ್ಯಾಭ್ಯಾಸಕ್ಕೆ ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ವಸತಿ ಶಾಲೆಗಳನ್ನು ತೆರೆಯಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

ಶ್ರೀ ಡಿ. ಸುಧಾಕರ (ಸಮಾಜ ಕಲ್ಯಾಣ ಸಚಿವರು) :

ಅ) ಹೌದು.

ಆ) 2009-10ನೇ ಸಾಲಿನಲ್ಲಿ ಪರಿಶಿಷ್ಟ ಜಾತಿಯ ಹೆಣ್ಣು ಮಕ್ಕಳಿಗಾಗಿ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯನ್ನು ತೆರೆಯಲಾಗಿದೆ.

ಇ) ಪರಿಶೀಲಿಸಲಾಗುವುದು.